71

**ವಿಧಾನ ಪರಿಷತ್ತಿನ ಸದಸ್ಯರುಗಳಾದ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ, ಶ್ರೀ ಪಿ.ಹೆಚ್.ಪೂಜಾರ್ ಹಾಗೂ ಇತರರು ನಿಯಮ-330 ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರ**

**ವಿಷಯ:- ವಿಜಯಪುರ ಜಿಲ್ಲೆ ನಿಡಗುಂದಿ ತಾಲ್ಲೂಕಿನ ಆಲಮಟ್ಟಿಯ ಲಾಲ್ ಬಹದ್ದೂರ್ ಶಾಸ್ತ್ರಿ ಜಲಾಶಯದ ಎತ್ತರ ಹೆಚ್ಚಳಕ್ಕೆ ತಡೆಕೋರಿ ಮಹಾರಾಷ್ಟ್ರ ಸರ್ಕಾರವು ಮಾನ್ಯ ಸುಪ್ರೀಂ ಕೋರ್ಟ್ ಮೊರೆ ಹೋಗಲು ನಿರ್ಧರಿಸಿರುವುದು ಖಂಡನಾರ್ಹ ವಿಷಯವಾಗಿದೆ ಹಾಗೂ ರಾಜ್ಯ ಸರ್ಕಾರವು ನಮ್ಮ ಭಾಗದ ಬಡ ರೈತರ, ಕಾರ್ಮಿಕರ, ಜನ ಸಾಮಾನ್ಯರ ಹಿತದೃಷ್ಟಿಯಿಂದ ಕೂಡಲೇ ಕಾರ್ಯಪ್ರವೃತ್ತರಾಗಿ ಕೈಗೊಳ್ಳಬೇಕಾದ ಕಾನೂನು ಹೋರಾಟದ ಬಗ್ಗೆ.**

****

ಕೃಷ್ಣಾ ಜಲವಿವಾದ ನ್ಯಾಯಾಧೀಕರಣ-2ರ ಅಂತಿಮ ತೀರ್ಪಿನಲ್ಲಿ ರಾಜ್ಯಕ್ಕೆ ಹಂಚಿಕೆಯಾದ ಒಟ್ಟಾರೆ 173 ಟಿ.ಎಂ.ಸಿ. (ನದಿ ಪಾತ್ರದಡಿ ನೈಸರ್ಗಿಕ ಹರಿವು 7 ಟಿ.ಎಂ.ಸಿ. ಒಳಗೊಂಡು) ಪೈಕಿ ಕೃಷ್ಣಾ ಮೇಲ್ದಂಡೆ ಯೋಜನೆ ಹಂತ-3 ಯೋಜನೆಗೆ 130 ಟಿ.ಎಂ.ಸಿ ಹಂಚಿಕೆಯಾಗಿರುತ್ತದೆ. ಕೃಷ್ಣಾ ಜಲವಿವಾದ ನ್ಯಾಯಾಧೀಕರಣ-2 ಅಂತಿಮ ತೀರ್ಪು ಕೇಂದ್ರ ಸರ್ಕಾರದಿಂದ ಗೆಜೆಟ್ ಪ್ರಕಟಣೆ ಆಗಬೇಕಾಗಿರುತ್ತದೆ. ಕೃಷ್ಣಾ ಮೇಲ್ದಂಡೆ ಯೋಜನೆ ಹಂತ -3ರ ಯೋಜನೆಗೆ ಹಂಚಿಕೆಯಾದ 130 ಟಿ.ಎಂ.ಸಿ. ನೀರಿನ ಬಳಕೆಗಾಗಿ ಆಲಮಟ್ಟಿ ಜಲಾಶಯದ ನೀರಿನ ಸಂಗ್ರಹಣೆಯನ್ನು RL 519.60 Mt. ದಿಂದ RL 524.256 Mt. ವರೆಗೆ ಎತ್ತರಿಸುವುದನ್ನು ಒಳಗೊಂಡಿರುತ್ತದೆ.

ಕೃಷ್ಣಾ ಮೇಲ್ದಂಡೆ ಹಂತ-3ರಡಿ ಆಲಮಟ್ಟಿ ಜಲಾಶಯದ ನೀರಿನ ಸಂಗ್ರಹಣೆಯನ್ನು RL 519.60 Mt. ದಿಂದ RL 524.256 Mt. ವರೆಗೆ ಎತ್ತರಿಸುವ ಕುರಿತಂತೆ ಈಗಾಗಲೇ ಕೃಷ್ಣಾ ಜಲ ವಿವಾದ ನ್ಯಾಯಾಧೀಕರಣ-2ರ ಅಂತಿಮ ತೀರ್ಪಿನ ವರದಿ (2010ರಲ್ಲಿ) ಯಲ್ಲಿ "Height of Almatti Dam – Issue No.14 ರಲ್ಲಿ ಈ ಕೆಳಗಿನಂತೆ ನಮೂದಿಸಲಾಗಿರುತ್ತದೆ.

> "Whether Karnataka is entitled to storage of water up to the level of 524.256 m in the Almatti Dam or the height of the Almatti Dam be restricted at 515 m as claimed by Andhra Pradesh or 512 m as claimed by Maharashtra?"

ಮೇಲ್ಕಂಡ Issue No.14ಗೆ ಸಂಬಂಧಪಟ್ಟಂತೆ, ಕೃಷ್ಣಾ ಜಲವಿವಾದ ನ್ಯಾಯಾಧೀಕರಣ-2 ರ ವರದಿಯಲ್ಲಿ ಅಂತಿಮವಾಗಿ ಈ ಕೆಳಕಂಡಂತೆ ತೀರ್ಪು ದಾಖಲಿಸಿರುತ್ತದೆ.

> "In view of the discussion held above, we decide the issue in affirmative to the extent that State of Karnataka is entitled to storage of water up to the level of 524.256 m in Almatti Reservoir and in negative to the extent that height of Almatti Dam may be restricted at 515 m as claimed by Andhra Pradesh or 512 m as claimed by Maharashtra."

ಮುಂದುವರೆದು, ಕೃಷ್ಣಾ ಜಲ ವಿವಾದ ನ್ಯಾಯಾಧೀಕರಣ-2ರ ಅಂತಿಮ ವರದಿ (2010 Vol-IV) ಯಲ್ಲಿ Submergence in Maharashtra ಕುರಿತಂತೆ Issue No.10 ರಲ್ಲಿ ಈ ಕೆಳಕಂಡಂತೆ ನಮೂದಿಸಲಾಗಿರುತ್ತದೆ.

> "Whether, it is lawful for the State of Karnataka to construct dams or barrages or weirs which may or likely to submerge the territories of Maharashtra without its consent?"

ಮೇಲ್ಕಂಡ Issue No.10ಗೆ ಸಂಬಂಧಪಟ್ಟಂತೆ, ಕೃಷ್ಣಾ ಜಲವಿವಾದ ನ್ಯಾಯಾಧೀಕರಣ-2ರ ವರದಿಯಲ್ಲಿ ಅಂತಿಮವಾಗಿ ಈ ಕೆಳಕಂಡಂತೆ ತೀರ್ಪು ದಾಖಲಿಸಿರುತ್ತದೆ.

> "......... After considering the facts and circumstances, it has been held that the State of Karnataka could go ahead with FRL 524.256 m at Almatti Dam. It has been held that no submergence was likely to take place in the State of Maharashtra on the basis of the report of the hydrographic survey conducted about actual sedimentation in Hipparagi Barrage and Almatti Dam."

ಮೇಲ್ಕಂಡ ಇತ್ಯರ್ಥಗೊಂಡ ವಿಷಯದ ಕುರಿತಂತೆ ಮಹಾರಾಷ್ಟ್ರ ರಾಜ್ಯವು ಸುಪ್ರೀಂಕೋರ್ಟ್‌ನಲ್ಲಿ ಮಧ್ಯಂತರ ಅರ್ಜಿ ಸಲ್ಲಿಸಿದ ಪಕ್ಷದಲ್ಲಿ, ರಾಜ್ಯ ಸರ್ಕಾರವು ಶೀಘ್ರದಲ್ಲಿಯೇ ಎಲ್ಲಾ ಕಾನೂನಾತ್ಮಕ ಕ್ರಮಗಳನ್ನು ಜರುಗಿಸಲು ಸಿದ್ಧವಿರುತ್ತದೆ.

ದಿನಾಂಕ:16.09.2011ರ ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಲ್ಲಿ ಕೃಷ್ಣಾ ನ್ಯಾಯಾಧೀಕರಣ-2ರ ಅಂತಿಮ ತೀರ್ಪನ್ನು ಗೆಜೆಟ್ ಪ್ರಕಟಣೆ ಮಾಡದಂತೆ ಕೇಂದ್ರ ಸರ್ಕಾರಕ್ಕೆ ಆದೇಶಿಸಲಾಗಿದ್ದು, ಸದರಿ ತೀರ್ಪನ್ನು ಮಾರ್ಪಡಿಸುವಂತೆ ಕೋರಿ ರಾಜ್ಯ ಸರ್ಕಾರವು ಮಾನ್ಯ ಸರ್ವೋಚ್ಚ ನ್ಯಾಯಾಲಯಕ್ಕೆ ಮಧ್ಯಕಾಲೀನ ಅರ್ಜಿಗಳನ್ನು ಸಲ್ಲಿಸಿದೆ.

ಕೃಷ್ಣಾ ನ್ಯಾಯಾಧೀಕರಣದ ಅಂತಿಮ ತೀರ್ಪಿನ್ನು ಗೆಜೆಟ್ ಅಧಿಸೂಚನೆ ಹೊರಡಿಸುವ ಬಗ್ಗೆ, ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶವನ್ನು ಮಾರ್ಪಡಿಸಲು ಸೂಕ್ತ ಅಫಿಡವಿಟ್ ಸಲ್ಲಿಸಿ ನಂತರ ನ್ಯಾಯಾಧೀಕರಣದ ಆದೇಶವನ್ನು ಪ್ರಕಟಿಸಲು ಅಗತ್ಯ ಕ್ರಮ ಕೈಗೊಳ್ಳಲು ನಿರಂತರವಾಗಿ ಕೇಂದ್ರ ಸರ್ಕಾರವನ್ನು ಕೋರಲಾಗಿದೆ. ಸದರಿ ವಿಷಯದ ಕುರಿತು ರಾಜ್ಯ ಸರ್ಕಾರವು ಎಲ್ಲಾ ಆಡಳಿತಾತ್ಮಕ ಹಾಗೂ ಕಾನೂನಾತ್ಮಕ ಕ್ರಮಗಳನ್ನು ಕೈಗೊಳ್ಳಲಾಗಿದೆ.

(ಜಸಂಇ 40 ಡಬ್ಲ್ಯೂಎಂ 2025)

(ಡಿ.ಕೆ. ಶಿವಕುಮಾರ್)
ಉಪಮುಖ್ಯಮಂತ್ರಿಗಳು